# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್ ರಸ್ತೆ, ತುಮಕೂರು -572103

ಸಂಖ್ಯೆ:ತುವಿ:ಶೈ.ವಿ:UG:2025-26:/1923 ದಿನಾಂಕ:18.09.2025

## ಸುತ್ತೋಲೆ

ವಿಷಯ:- 2025-26ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿ ಪ್ರೋಗ್ರಾಂಗಳ ಪ್ರವೇಶಾತಿ ಶುಲ್ಕ ಪಾವತಿಸಿರುವ ರಸೀದಿಗಳನ್ನು Upload ಮಾಡಲು ಮಾತ್ರ ಅವಧಿಯನ್ನು ವಿಸ್ತರಿಸಿರುವ ಕುರಿತು.

ಉಲ್ಲೇಖ:- ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:18.09.2025.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2025-26ನೇ ಸಾಲಿನ ಸ್ನಾತಕ ಪದವಿಯ ವಿವಿಧ ಕೋರ್ಸುಗಳಿಗೆ ಪ್ರವೇಶಾತಿ ಪಡೆಯಲು ದಿನಾಂಕ:17.09.2025ರ ವರೆಗೆ ವಿಸ್ತರಿಸಲಾಗಿತ್ತು. ಆದರೆ ಇನ್ನು ಕೆಲವು ಕಾಲೇಜುಗಳ ಪ್ರಥಮ/ ದ್ವಿತೀಯ/ ತೃತೀಯ ವರ್ಷದ ವಿದ್ಯಾರ್ಥಿಗಳು Fee Receipt Upload ಮಾಡಿಲ್ಲವೆಂದು ತಿಳಿಸಿ ಈ ಒಂದು ಬಾರಿ Fee Receipt Upload ಮಾಡಲು ಅನುಮತಿ ಕೋರಿರುತ್ತಾರೆ. ವಿಶ್ವವಿದ್ಯಾನಿಲಯವು ಸದರಿ ವಿಷಯವನ್ನು ಗಂಭೀರವಾಗಿ ಪರಿಗಣಿಸಿದ್ದು, ಪದೇ ಪದೇ ದಿನಾಂಕಗಳನ್ನು ವಿಸ್ತರಿಸುತ್ತಾ ಬಂದಿದ್ದು, ಕಾಲಕಾಲಕ್ಕೆ ತರಗತಿಗಳನ್ನು ನಡೆಸಲು ಹಾಗೂ ಪರೀಕ್ಷೆಗಳನ್ನು ನಡೆಸಲು ತೊಂದರೆಯಾಗುತ್ತಿದೆ. ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಅವರ ಮನವಿಗಳನ್ನು ಇದೊಂದು ಬಾರಿ ಪರಿಗಣಿಸಿ ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ ಪ್ರಥಮ/ ದ್ವಿತೀಯ/ ತೃತೀಯ ವರ್ಷದ ವಿವಿಧ ಸ್ನಾತಕ ಪದವಿಗಳಿಗೆ ಈಗಾಗಲೇ ದಿನಾಂಕ:17.09.2025ರ ಒಳಗೆ ಪ್ರವೇಶಾತಿ ಪಡೆದು Fee Receipt Upload ಮಾಡದ ವಿದ್ಯಾರ್ಥಿಗಳಿಗೆ ಮಾತ್ರ ದಿನಾಂಕ:20.09.2025ರ ವರೆಗೆ ಅವಕಾಶ ಕಲ್ಪಿಸಿಕೊಡಲಾಗಿದ್ದು, ಅಂತಹ ವಿದ್ಯಾರ್ಥಿಗಳು ದಿನಾಂಕ:20.09.2025 ರ ಒಳಗೆ ಕಡ್ಡಾಯವಾಗಿ Upload ಮಾಡುವಂತೆ ಈ ಮೂಲಕ ಸೂಚಿಸಲಾಗಿದೆ.

ಸದರಿ ವಿಷಯವನ್ನು ವಿದ್ಯಾರ್ಥಿಗಳ ಗಮನಕ್ಕೆ ತರುವುದು, ಒಂದು ವೇಳೆ ಮೇಲೆ ತಿಳಿಸಿರುವ ದಿನಾಂಕದೊಳಗೆ ವಿದ್ಯಾರ್ಥಿಗಳು Upload ಮಾಡದಿದ್ದಲ್ಲಿ ಮುಂದಿನ ಆಗು-ಹೋಗುಗಳಿಗೆ ವಿದ್ಯಾರ್ಥಿಗಳು ಮತ್ತು ಕಾಲೇಜಿನವರೇ ನೇರ ಜವಾಬ್ದಾರರಾಗಿರುತ್ತಾರೆ ಎಂದು ತಿಳಿಸುತ್ತಾ, ಇನ್ನು ಮುಂದೆ ಯಾವುದೇ ಕಾರಣಕ್ಕೂ ದಿನಾಂಕವನ್ನು ವಿಸ್ತರಿಸಲಾಗುವುದಿಲ್ಲ. ಈಗಾಗಲೇ ತಿಳಿಸಿರುವಂತೆ ದಿನಾಂಕ:20.09.2025ರಿಂದ ಪ್ರವೇಶಾತಿ ಅನುಮೋದನೆಗೆ ನಿಗಧಿಪಡಿಸಿರುವ ವೇಳಾಪಟ್ಟಿಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಆದೇಶದ ಮೇರೆಗೆ,

ಉಪಕುಲಸಚಿವರು

ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ

1. ಪ್ರಾಂಶುಪಾಲರುಗಳು ಎಲ್ಲಾ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.
2. ಪ್ರಾಂಶುಪಾಲರುಗಳು ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.

ಪ್ರತಿಗಳು:

1. ಕುಲಸಚಿವರು (ಮೌಲ್ಯಮಾಪನ) ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು- ವೆಬ್‌ಸೈಟ್‌ನಲ್ಲಿ ಇಂದೇ ಪ್ರಕಟಿಸುವುದು